ಡಾ ವಿ ಎಸ್ ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ಶಿವಮೊಗ್ಗದಲ್ಲಿರುವ ಬಾಪೂಜಿ ಆಯುರ್ವೇದ ಕಾಲೇಜಿನಲ್ಲಿರುವ ಪ್ರಥಮ ವರ್ಷದ ಬಿ ಎ ಎಂ ಎಸ್ ಕೋರ್ಸಿನ ಪ್ರವೇಶಕ್ಕೆ ಸರ್ಕಾರವು 40 ಸೀಟುಗಳನ್ನು ಮಂಜೂರು ಮಾಡಿರುತ್ತದೆ ಆದರೆ ಈ ಮಹಾವಿದ್ಯಾಲಯವು ಖಾಸಗಿ ಸಂಸ್ಥೆಯಾಗಿರುವುದರಿಂದ ಸಿಬ್ಬಂದಿ ವರ್ಗದ ಸಂಖ್ಯೆ ಮಂಜೂರು ಮಾಡುವುದು ಸರ್ಕಾರದಿಂದ ಅವಶ್ಯವಾಗಿರುವುದಿಲ್ಲ ಆದರೆ ಈ ಮಹಾವಿದ್ಯಾಲಯಕ್ಕೆ ಹೊಂದಿಕೊಂಡಿರುವ ಆಸ್ಪತ್ರೆಯಲ್ಲಿ 28 ವೈದ್ಯರುಗಳು, 16 ಶುಶ್ರೂಷಕರು ಹಾಗೂ 20 ಇತರೆ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಮಹಾವಿದ್ಯಾಲಯದಲ್ಲಿ 34 ಬೋಧನಾ ಸಿಬ್ಬಂದಿಗಳು (ಆಸ್ಪತ್ರೆಯ ವೈದ್ಯರುಗಳೂ ಸೇರಿದಂತೆ) ಹಾಗೂ 27 ಇತರೆ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ

ಆ) ಸಿ ಸಿ ಐ ಎಂ ನವದೆಹಲಿ ಹಾಗೂ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವುಗಳ ಪ್ರಕಾರ ಈ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೀಡಬೇಕಾದ ಕನಿಷ್ಠ ಸೌಲಭ್ಯಗಳನ್ನು ಒದಗಿಸಲಾಗಿದೆ

ಇ) ಈ ಕಾಲೇಜಿನಲ್ಲಿ 214 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, 34 ಬೋಧಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ

ಈ) ಈ ಮಹಾವಿದ್ಯಾಲಯದಲ್ಲಿ ನಿಗದಿಪಡಿಸಿರುವ ಪ್ರವೇಶ ಸಾಮರ್ಥ್ಯಕ್ಕಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಇರುವುದಿಲ್ಲ ಶಿಕ್ಷಕ–ವಿದ್ಯಾರ್ಥಿಗಳ ಸಂಖ್ಯೆಯು ನಿಗಧಿತ ಅನುಪಾತಕ್ಕೆ ಸರಿ ಇದೆ

ಉ) ಇಲ್ಲ ಈ ಮಹಾವಿದ್ಯಾಲಯವು ಸರ್ಕಾರವು ನಿಗದಿಗೊಳಿಸದ ಪ್ರವೇಶ ಸಂಖ್ಯೆಗೆ ಸಮನಾಗಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುತ್ತದೆ

ಊ) ಉದ್ಭವಿಸುವುದಿಲ್ಲ

ಋ) ಇಲ್ಲ

ಎ) ಉದ್ಭವಿಸುವುದಿಲ್ಲ

585 (1058) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಟಿರಾದ್) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೈದರಾಬಾದ್ ಕರ್ನಾಟಕ ಪ್ರದೇಶ ವ್ಯಾಪ್ತಿಯ ಜಿಲ್ಲೆಗಳಲ್ಲಿರುವ ಪಶುವೈದ್ಯ ಆಸ್ಪತ್ರೆ ಹಾಗೂ ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು?

ಆ) ಈ ಆಸ್ಪತ್ರೆಗಳು ಹಾಗೂ ಚಿಕಿತ್ಸಾಲಯಗಳಿಗೆ ಮಂಜೂರಾಗಿರುವ ವೈದ್ಯರ ಸಂಖ್ಯೆ ಎಷ್ಟು? ಈ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ ಹಾಗೂ ಎಷ್ಟು ಹುದ್ದೆಗಳು ಖಾಲಿ ಇವೆ ಹಾಗೂ ಈ ಹುದ್ದೆಗಳು ಎಷ್ಟು ಅವಧಿಯಿಂದ ಖಾಲಿ ಇವೆ? ಆಸ್ಪತ್ರೆವಾರು ವಿವರಗಳನ್ನು ಒದಗಿಸುವುದು?

ಇ) ಖಾಲಿ ಇರುವ ವೈದ್ಯ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನುಸರಿಸಿರುವ ಕ್ರಮಗಳೇನು?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ಹೈದರಾಬಾದ್ ಕರ್ನಾಟಕ ಪ್ರದೇಶ ವ್ಯಾಪ್ತಿಯ ಬೀದರ್, ಗುಲ್ಬರ್ಗಾ, ರಾಯಚೂರು ಬಳ್ಳಾರಿ ಹಾಗೂ ಕೊಪ[illegible] ಜಿಲ್ಲೆಗಳಲ್ಲಿ 39 ಪಶು ಆಸ್ಪತ್ರೆ ಮತ್ತು 324 ಪಶು ಚಿಕಿತ್ಸಾಲಯಗಳನ್ನೊಳಗೆ[illegible]ಟ್ಟಾರೆ 662 ಪಶುವೈದ್ಯ ಸಂಸ್ಥೆಗಳಿವೆ

ಆ) ಈ ಆಸ್ಪತ್ರೆ ಮತ್ತು ಪಶ[illegible]ಗೆ 46 ಸಹಾಯಕ ನಿರ್ದೇಶಕರು ಮತ್ತು 371 ಪಶುವೈದ್ಯಾಧಿ[illegible]ಗಿದ್ದು, ಈ ಪೈಕಿ 18 ಸಹಾಯಕ ನಿರ್ದೇಶಕರು, 126 ಪಶ[illegible]ರ್ಯಾಗಿರುತ್ತವೆ ಇವುಗಳಲ್ಲಿ 28 ಸಹಾಯಕ ನಿರ್ದೇಶ[illegible]ವೈದ್ಯಾಧಿಕಾರಿಗಳ ಹುದ್ದೆ ಖಾಲಿ ಇರುತ್ತವೆ ಹುದ್ದೆವಾರು [illegible]ಂಧದಲ್ಲಿ ಸಲ್ಲಿಸಿದೆ

ಇ) ಶೇಕಡ 90 ರಷ್ಟು ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಮುಂಬಡ್ತಿ ಮುಖೇನ ಭರ್ತಿ ಮಾಡಲಾಗುವುದು ಶೇ 10% ರಷ್ಟು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಬೇಕಾಗಿದ್ದು 4 ಸಹಾಯಕ ನಿರ್ದೇಶಕರ ಹುದ್ದೆಗಳನ್ನು ನೇರ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಕ್ರಮ ಇದ್ದು, ಪ್ರಸ್ತುತ ಕರ್ನಾಟಕ ಲೋಕ ಸೇವಾ ಆಯೋಗದಿಂದ 41 ಪಶುವೈದ್ಯಾಧಿಕಾರಿಗಳ ನೇಮಕಾತಿಗೆ ಸಂದರ್ಶನ ಮುಗಿದಿದ್ದು, ನೇಮಕಾತಿ ಆದೇಶ ನೀಡಬೇಕಾಗಿದೆ ಮತ್ತೆ 77 ಪಶುವೈದ್ಯಾಧಿಕಾರಿಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ವಿಶೇಷ ನೇಮಕಾತಿ ನಿಯಮ 2003ರ ಅಡಿ 577 ಪಶುವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಬೇಕಾಗಿದ್ದು, ಇದುವರೆಗೆ 383 ಪಶುವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಲಾಗಿದ್ದು ಉಳಿಕೆ 194 ಪಶುವೈದ್ಯಾಧಿಕಾರಿಗಳ ನೇಮಕಾತಿ ಮಾಡಲು ಪ್ರಸ್ತಾವನೆ ಸಹ

ಪರಿಶೀಲನೆಯಲ್ಲಿದೆ ಪಶುವೈದ್ಯಕೀಯ ಮೇಲ್ವಿಚಾರಕರು ಮತ್ತು ಹಿರಿಯ ಪಶುವೈದ್ಯಕೀಯ ಪರೀಕ್ಷಕರು ಹುದ್ದೆಯನ್ನು ಮುಂಬಡ್ತಿ ಮುಖೇನ ಭರ್ತಿ ಮಾಡಲಾಗುತ್ತದೆ 300 ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ಇಲಾಖೆಯಲ್ಲಿನ ಎಸ್ ಎಸ್ ಎಲ್ ಸಿ ಪಾಸಾದ ಡಿ ದರ್ಜೆ ನೌಕರರಿಗೆ ತರಬೇತಿ ನೀಡಿ ಬಡ್ತಿ ಮುಖೇನ ತುಂಬಲು ಕ್ರಮವಹಿಸಿದ್ದು ಈಗಾಗಲೇ 244 ಡಿ ದರ್ಜೆ ನೌಕರರಿಗೆ ತರಬೇತಿ ನೀಡಲಾಗಿದೆ ಎಸ್ ಎಸ್ ಎಲ್ ಸಿ ಅಂಕಪಟ್ಟಿ ಪರೀಕ್ಷೆ ಮಂಡಳಿಯ ಪರಿಶೀಲನೆಗೆ ಕಳುಹಿಸಿದ್ದು ವರದಿ ಬಂದ ಕೂಡಲೇ ಭರ್ತಿ ಮಾಡಲು ಕ್ರಮ ಜರುಗಿಸಲಾಗುವುದು 300 ಡಿ ದರ್ಜೆ ನೌಕರರ ಹುದ್ದೆಗಳನ್ನು ಔಟ್ ಸೋರ್ಸ್ ಮುಖೇನ ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ